# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1837(2120)
ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 25.03.2026
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯಿತಿಗಳ ಕಛೇರಿ ಹಾಗೂ ಇನ್ನಿತರ ವಿವಿಧ ಸಾರ್ವಜನಿಕ ಉದ್ದೇಶಕ್ಕಾಗಿ ಜಮೀನು ಮಂಜೂರಾತಿ ಕೋರಿ ಕಂದಾಯ ಇಲಾಖೆಗೆ ಯಾವುದಾದರು ಪ್ರಸ್ತಾವನೆಗಳು ಪೈಕಿ ಜಮೀನು ಮಂಜೂರಾತಿಗೊಳಿಸಲು ಬಾಕಿ ಇರುವ ಹಾಗೂ ತಿರಸ್ಕರಿಸಿರುವ ಪ್ರಸ್ತಾವನೆಗಳು ಎಷ್ಟು; ಅವು ಯಾವುವು; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಕಛೇರಿ ಹಾಗೂ ಇನ್ನಿತರ ವಿವಿಧ ಸಾರ್ವಜನಿಕ ಉದ್ದೇಶಕ್ಕಾಗಿ ಜಮೀನು ಮಂಜೂರಾತಿ ಕೋರಿ ಸ್ವೀಕೃತವಾ ಪ್ರಸ್ತಾವನೆಗಳ ಪೈಕಿ 28 ಪ್ರಸ್ತಾವನೆಗಳು ಮತ್ತು ಯಾದಗಿರಿ ಜಿಲ್ಲೆಯಲ್ಲಿ 06 ಪ್ರಸ್ತಾವನೆಗಳು ಬಾಕಿ ಇದ್ದು ಯಾವುದೇ ಪ್ರಸ್ತಾವನೆಗಳು ತಿರಸ್ಕೃತವಾಗಿರುವುದಿಲ್ಲ. |
| ಆ) | ಗ್ರಾಮ ಪಂಚಾಯಿತಿಗಳಿಗೆ ಸಾರ್ವಜನಿಕ ಉದೇಶಕ್ಕಾಗಿ ಮಂಜೂರಾದ ಜಮೀನು ಒತ್ತುವರಿ ಮಾಡಿಕೊಂಡಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಸಂಕ್ಷಿಪ್ತ ವಿವರ ನೀಡುವುದು) | ಕಲಬರುಗಿ ಹಾಗೂ ಯಾದಗಿರಿ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಕಂಡುಬಂದಿರುವುದಿಲ್ಲ. |
| ಇ) | ಯಾವ ಉದ್ದೇಶಕ್ಕಾಗಿ ಜಮೀನು ಮಂಜೂರು ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಿಕೊಳ್ಳುವುದನ್ನು ಖಚಿತ ಪಡಿಸಲು ಅನುಸರಿಸುವ ಕ್ರಮಗಳಾವುವು? | ಕಂದಾಯ ಇಲಾಖೆಯಿಂದ ಕಂದಾಯ ನಿರೀಕ್ಷಕರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳಿಂದ ಕಾಲ ಕಾಲಕ್ಕೆ ಸ್ಥಳ ಪರಿಶೀಲಿಸಲಾಗುತ್ತಿರುತ್ತದೆ. |

ಸಂಖ್ಯೆ: ಆರ್‌ಡಿ 32 ಎಲ್‌ಜಿಜಿ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು